Akashvani: Bangalore
Regional News
13.08.2025: 14.30hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು:

1. ಬಾಲ್ಯ ವಿವಾಹ ತಡೆಯಲು ರಾಜ್ಯದಲ್ಲಿ ಅಕ್ಕಾ ಪಡೆ - ವಿಧಾನಸಭೆಯಲ್ಲಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸ್ಪಷ್ಟನೆ
2. ನಿಷ್ಠ ಎರಡು ದಾಖಲೆಗಳಿದ್ದರೂ ಪರಿಗಣಿಸಿ ಜಮೀನು ಪೋಡಿ ಮಾಡಲು ಜಿಲ್ಲಾಧಿಕಾರಿಗಳಿಗೆ ಸಚಿವ ಕೃಷ್ಣ ಬೈರೇಗೌಡ ಸೂಚನೆ
3. ಆಗಸ್ಟ್ ೧೫ರಿಂದ ಮುಜರಾಯಿ ವ್ಯಾಪ್ತಿಯ ದೇವಾಲಯಗಳಲ್ಲಿ ನೀರಿನ ಬಾಟಲ್ ಸೇರಿದಂತೆ ಪ್ಲಾಸ್ಟಿಕ್ ನಿಷೇಧಿಸಿ ಸರ್ಕಾರ ಆದೇಶ
4. ಧರ್ಮಸ್ಥಳದಲ್ಲಿ ಮುಂದುವರಿದ ಅಂತಿಮ ಹಂತದ ಉತ್ಖನನ ಕಾರ್ಯ - ಶೀಘ್ರವೇ ತನಿಖೆ ಪೂರ್ಣಗೊಳಿಸುವಂತೆ ಬಿಜೆಪಿ ಆಗ್ರಹ
5. ಆದಾಯಕ್ಕಿಂತ ಅಧಿಕ ಆಸ್ತಿ ಗಳಿಸಿರುವ ಆರೋಪ; ಕಾಂಗ್ರೆಸ್ ಶಾಸಕ ಸತೀಶ್ ಸೈಲ್ ನಿವಾಸದ ಮೇಲೆ ಇಡಿ ದಾಳಿ

**********

ಶಾಲಾ-ಕಾಲೇಜು ವಿದ್ಯಾರ್ಥಿನಿಯರು ಹಾಗೂ ಮಹಿಳೆಯರ ಸುರಕ್ಷತೆ ದೃಷ್ಟಿಯಿಂದ ಮಹಿಳಾ ಪೊಲೀಸ್ ಒಳಗೊಂಡ ಅಕ್ಕಾ ಪಡೆ ಶೀಘ್ರವೇ ಜಾರಿಗೆ ಬರಲಿದೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ.

ಮಳೆಗಾಲದ ಅಧಿವೇಶನದ ಮೂರನೇ ದಿನವಾದ ಇಂದು ಚಿಕ್ಕನಾಯಕನಹಳ್ಳಿ ಕ್ಷೇತ್ರದ ಶಾಸಕ ಸುರೇಶ್ ಬಾಬು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು ಇದೇ ೧೫ರಿಂದ ಬಾಲ್ಯ ವಿವಾಹ ತಡೆಯುವಲ್ಲಿ ಅಕ್ಕ ಪಡೆ ಕಾರ್ಯ ನಿರ್ವಹಿಸಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಕೆಲವು ಸಮುದಾಯ ಮತ್ತು ಪಂಗಡಗಳಲ್ಲಿ ಆಚರಣೆಯಲ್ಲಿರುವ ಸಾಮಾಜಿಕ ಪದ್ಧತಿಗಳಿಂದಾಗಿ ಬಾಲ್ಯವಿವಾಹಗಳು ನಡೆಯುತ್ತಿದ್ದು, ಇದರಿಂದಾಗಿ ಬಾಲಗರ್ಭಿಣಿಯರ ಸಂಖ್ಯೆ ಹೆಚ್ಚಾಗುತ್ತಿದೆ. ಬಾಲ್ಯವಿವಾಹ ಸಾಮಾಜಿಕ ಪಿಡುಗಾಗಿದ್ದು, ಇದನ್ನು ಬೇರುಮಟ್ಟದಿಂದ ಕಿತ್ತೊಗೆಯಬೇಕು. ಬಾಲ್ಯವಿವಾಹ ತಡೆಗಟ್ಟಲು ಸರ್ಕಾರ ಸರ್ವ ಸನ್ನದ್ಧವಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ೨೦೨೨-೨೩ರಲ್ಲಿ ೪೦೫, ೨೦೨೩-೨೪ರಲ್ಲಿ ೬೦೯, ೨೦೨೪-೨೫ರಲ್ಲಿ ೬೮೫ ಬಾಲ ಗರ್ಭಿಣಿ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

**********

ಸರ್ಕಾರದಿಂದ ಫಲಾನುಭವಿಗಳಿಗೆ ಮಂಜೂರಾಗಿರುವ ಜಮೀನುಗಳ ಪೋಡಿ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಈ ವರ್ಷಾಂತ್ಯದ ವೇಳೆಗೆ ಸುಮಾರು ಎರಡು ಲಕ್ಷ ಜಮೀನುಗಳ ಪೋಡಿ ಮಾಡುವ ಗುರಿ ಹೊಂದಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿಧಾನ ಪರಿಷತ್ ನಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಎನ್. ನಾಗರಾಜು ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಕನಿಷ್ಠ ಐದು ದಾಖಲೆ ಗಳಿರಬೇಕೆಂಬ ಷರತ್ತುಗಳನ್ನು ಸಡಿಲಿಸಿ

ಕನಿಷ್ಠ ಮೂರು, ಇಲ್ಲವೇ ಎರಡು ದಾಖಲೆಗಳಿದ್ದರೂ ಪರಿಗಣಿಸಿ ಜಮೀನುಗಳನ್ನು ಪೋಡಿ ಮಾಡಿಕೊಡಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ. ಜಮೀನುಗಳಿಗೆ ಸಂಬಂಧಿಸಿದಂತೆ ತಾಲ್ಲೂಕು ಕಛೇರಿಗಳಲ್ಲಿರುವ ಎಲ್ಲಾ ದಾಖಲೆಗಳನ್ನು ಸ್ಕ್ಯಾನ್ ಮಾಡಬೇಕೆಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ನೂರು ಕೋಟಿ ಪುಟಗಳಷ್ಟು ದಾಖಲೆಗಳನ್ನು ಸಂರಕ್ಷಣೆ ಮಾಡುವ ಕೆಲಸಕ್ಕೆ ಸರ್ಕಾರ ಮುಂದಾಗಿದೆ ಎಂದು ತಿಳಿಸಿದ್ದಾರೆ.

**********

ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ಇರುವ ದೇವಾಲಯಗಳಲ್ಲಿ ಕಡ್ಡಾಯವಾಗಿ ನೀರಿನ ಬಾಟಲ್ ಸೇರಿದಂತೆ ಪ್ಲಾಸ್ಟಿಕ್ ಉತ್ಪನ್ನಗಳನ್ನು ನಿಷೇಧಿಸಿ ಸರ್ಕಾರ ಆದೇಶ ಹೊರಡಿಸಿದೆ ಎಂದು ಮುಜರಾಯಿ ಮತ್ತು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ವಿಧಾನ ಪರಿಷತ್ ನಲ್ಲಿ ಇಂದು ಮಾಹಿತಿ ನೀಡಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಪಕ್ಷದ ಸದಸ್ಯ ಮಧು ಜಿ.ಮಾದೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಇದೇ ೧೫ ರಿಂದ ಅನ್ವಯ ವಾಗುವಂತೆ ಇಲಾಖೆಯ ದೇವಾಲಯಗಳಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧ ಆದೇಶ ಜಾರಿ ಮಾಡಲಾಗಿದೆ. ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿ ಮಾಡುವಂತೆ ಧಾರ್ಮಿಕ ದತ್ತಿ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದ್ದಾರೆ.

**********

ಧರ್ಮಸ್ಥಳದಲ್ಲಿ ಶವಗಳನ್ನು ಹೂತು ಹಾಕಲಾಗಿದೆ ಎಂಬ ಪ್ರಕರಣಕ್ಕೆ ಸಂಬಂಧಿಸಿದಂತೆ ೧೩ನೇ ಸಮಾಧಿ ಸ್ಥಳದಲ್ಲಿ ಎಸ್ಐಟಿ ಇಂದು ಅಂತಿಮ ಹಂತದ ಶೋಧ ಕಾರ್ಯ ಮುಂದುವರಿಸಿದೆ. ಇಂದಿನ ಕಾರ್ಯಾಚರಣೆಯಲ್ಲಿ ಏನೂ ಪತ್ತೆಯಾಗದಿದ್ದರೆ ಉತ್ಖನನ ಕಾರ್ಯವನ್ನು ಸ್ಥಗಿತಗೊಳಿಸುವ ಸಾಧ್ಯತೆ ಇದೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ನಿನ್ನೆ ಜಿಪಿಆರ್ ಬಳಸಿ, ೧೮ ಅಡಿ ಆಳ ಗುಂಡಿ ತೆಗೆದರೂ ಏನು ಸಿಕ್ಕಿಲ್ಲದ ಹಿನ್ನೆಲೆಯಲ್ಲಿ ಎಸ್ಐಟಿ ಅಧಿಕಾರಿಗಳು ಈ ನಿರ್ಧಾರಕ್ಕೆ ಬಂದಿದ್ದಾರೆ ಎನ್ನಲಾಗಿದೆ.

**********

ಧರ್ಮಸ್ಥಳ ಪ್ರಕರಣದ ಕುರಿತು ವಿಶೇಷ ತನಿಖಾ ತಂಡ ತನಿಖೆಯನ್ನು ಶೀಘ್ರವೇ ಪೂರ್ಣಗೊಳಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ೧೭ರಂದು ಧರ್ಮಸ್ಥಳಕ್ಕೆ ರಾಜ್ಯದ ಬಿಜೆಪಿ ಶಾಸಕರು ಹಾಗೂ ಪರಿಷತ್ ಸದಸ್ಯರು ಭೇಟಿ ನೀಡಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ. ಧರ್ಮಸ್ಥಳದ ವಿರುದ್ಧ ಅಪಪ್ರಚಾರದ ಹಿನ್ನೆಲೆಯಲ್ಲಿ ಬಿಜೆಪಿ ನಾಯಕರು ಭೇಟಿ ನೀಡಿ, ದೇವರ ದರ್ಶನ ಪಡೆಯುವುದಾಗಿ ಸ್ಪಷ್ಟಪಡಿಸಿದ್ದಾರೆ.

**********

ಅಕ್ರಮ ಗಣಿಗಾರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಶಾಸಕ ಸತೀಶ್ ಸೈಲ್ ಅವರ ಕಾರವಾರದ ನಿವಾಸದ ಮೇಲೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಇಂದು ದಾಳಿ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಶಾಸಕರು ನಿವಾಸದಲ್ಲಿ ಇರಲಿಲ್ಲ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಪ್ರಕರಣದಲ್ಲಿ ಜೈಲು ಶಿಕ್ಷೆಗೆ ಗುರಿಯಾಗಿರುವ ಸತೀಶ್ ಸೈಲ್ ಪ್ರಸ್ತುತ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದಾರೆ. ಬೇಲೇಕೇರಿ ಕಬ್ಬಿಣದ ರಫ್ತು ಪ್ರಕರಣಕ್ಕೆ

ಸಂಬಂಧಿಸಿದ ೬ ಪ್ರಕರಣಗಳಲ್ಲಿ ಸೈಲ್ ಅವರಿಗೆ ನ್ಯಾಯಾಲಯ ೭ ವರ್ಷಗಳ ಜೈಲು ಶಿಕ್ಷೆ ವಿಧಿಸಿತ್ತು. ೬ ಪ್ರಕರಣಗಳಲ್ಲಿ ೪೪ ಕೋಟಿ ರೂಪಾಯಿ ದಂಡ ವಿಧಿಸಿತ್ತು. ಆದಾಯಕ್ಕಿಂತ ಅಧಿಕ ಆಸ್ತಿಗಳಿಸಿರುವ ಆರೋಪವೂ ಇವರ ಮೇಲಿದ್ದು, ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

**********

ಕೇಂದ್ರ ಸರ್ಕಾರದ ಆತ್ಮನಿರ್ಭರ ಭಾರತ ಅಭಿಯಾನದ ಅಂಗವಾಗಿ ಮೈಕ್ರೋ ಫುಡ್ ಎಂಟರ್‌ಪ್ರೈಸಸ್ ಯೋಜನೆಯು ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ಯಮಗಳಿಗೆ ಹಣಕಾಸು, ತಾಂತ್ರಿಕ ಮತ್ತು ವ್ಯಾಪಾರ ಬೆಂಬಲವನ್ನು ಒದಗಿಸುವ ಗುರಿ ಹೊಂದಿದೆ. ವಿಜಯಪುರ ಜಿಲ್ಲೆಯಲ್ಲಿ ನಿರ್ದಿಷ್ಟ ಸ್ಥಾಪಿತ ಉತ್ಪನ್ನಗಳ ಮೇಲೆ ಇದು ಕೇಂದ್ರೀಕರಿಸಲಿದೆ. ಕ್ರೆಡಿಟ್ ಲಿಂಕ್ಡ್ ಸಬ್ಸಿಡಿಗಳು, ಕೌಶಲ್ಯ ಉನ್ನತೀಕರಣ ಮತ್ತು ಮಾರುಕಟ್ಟೆ ಬೆಂಬಲದ ಮೂಲಕ ಸಮಗ್ರ ಏಕೀಕರಣವನ್ನು ಉತ್ತೇಜಿಸುತ್ತದೆ ಎಂದು ಜಿಲ್ಲಾಧಿಕಾರಿ ಡಾ.ಆನಂದ್ ಕೆ. ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**********

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಆಯೋಜಿಸಿರುವ ಪ್ರತಿಷ್ಠಿತ ಮಹಾರಾಜ ಟ್ರೋಫಿ-೨೦೨೫ರ ಕ್ರಿಕೆಟ್ ಪಂದ್ಯಾವಳಿಯ ಮೂರನೇ ದಿನವಾದ ಇಂದು ಮೈಸೂರಿನ ಮಾನಸಗಂಗೋತ್ರಿಯ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ ಬೆಂಗಳೂರು ಬ್ಲಾಸ್ಟರ್ಸ್ ಹಾಗೂ ಹುಬ್ಬಳ್ಳಿ ಟೈಗರ್ಸ್ ತಂಡದ ನಡುವೆ ಹಣಾಹಣಿ ನಡೆಯಲಿದೆ. ಸಂಜೆ ಇದೇ ಮೈದಾನದಲ್ಲಿ ಶಿವಮೊಗ್ಗ ಲಯನ್ಸ್ ತಂಡ ಹಾಗೂ ಮಂಗಳೂರು ಡ್ರಾಗನ್ಸ್ ತಂಡದ ನಡುವೆ ಎರಡನೇ ಪಂದ್ಯ ನಡೆಯಲಿದೆ.

**********

ಚಿಕ್ಕಮಗಳೂರು ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಇಂದು ಸ್ವಚ್ಚತೆಯೊಂದಿಗೆ ಸ್ವಾತಂತ್ರ್ಯೋತ್ಸವ ಹಾಗೂ ಹರ್ ಘರ್ ತಿರಂಗಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಮೂಡಿಗೆರೆ ತಾಲೂಕಿನ ಗೋಣಿಬೀಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಾಲೆ, ರಸ್ತೆ ಸೇರಿ ಸಾರ್ವಜನಿಕ ಸ್ಥಳಗಳಲ್ಲಿ ಈ ಅಭಿಯಾನದ ಅಂಗವಾಗಿ ಸ್ಥಳಿಯ ಜನರು ಸ್ವಚತಾ ಕಾರ್ಯಕ್ರಮ ನಡೆಸಿದರು. ಅಜ್ಜಂಪುರ ತಾಲೂಕಿನ ಬೂಕ್ಕಾಂಬೂದಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಶಾಲೆ, ಅಂಗನವಾಡಿ ಕೇಂದ್ರಗಳ ಸುತ್ತ ಸ್ವಚ್ಚತಾ ಕಾರ್ಯ ನಡೆಸಲಾಯಿತು. ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರುಗಳು ಸಾರ್ವಜನಿಕರ ಸಹಯೋಗದದಲ್ಲಿ ತ್ರಿವರ್ಣ ಧ್ವಜ ಹಿಡಿದು ಹರ್ ಘರ್ ತಿರಂಗಾ ಅಭಿಯಾನಕ್ಕೆ ಚಾಲನೆ ನೀಡಿದರು.

**********

ಹಾವೇರಿ ಜಿಲ್ಲೆಯ ರಟ್ಟೀಹಳ್ಳಿ ಪಟ್ಟಣ ಪಂಚಾಯಿತಿ ಸದಸ್ಯರ ಆಯ್ಕೆಗಾಗಿ ಇದೇ ೧೭ರಂದು ಮತದಾನ ನಿಗದಿಯಾಗಿದೆ. ಇದೇ ೧೫ರ ಸಂಜೆ ೫ ಗಂಟೆಯಿಂದ ಆಗಸ್ಟ್ ೧೭ರ ಸಂಜೆ ೫ ಗಂಟೆಯವರೆಗೆ ಪಟ್ಟಣದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಆದೇಶ ಹೊರಡಿಸಿದ್ದಾರೆ. ಮತದಾನ ಮುಕ್ತಾಯಗೊಳ್ಳುವ ಅವಧಿಯ ೪೮ ಗಂಟೆಗಳ ಪೂರ್ವದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಹಾಗೂ ಮತದಾನ ಸುಗಮವಾಗಿ ನಡೆಸುವ ಉದ್ದೇಶದಿಂದ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಚುನಾವಣೆ ನಿಮಿತ್ತ ಇದೇ ೧೯ರ ಸಂಜೆ ೬ ಗಂಟೆಯಿಂದ

೧೮ರ ಸಂಜೆ ೬ ಗಂಟೆಯವರೆಗೆ ಮದ್ಯ ಮಾರಾಟ ಹಾಗೂ ಮದ್ಯಪಾನ ನಿಷೇಧಿಸಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ.

**********

ಉತ್ತರ ಕನ್ನಡ ಜಿಲ್ಲೆಯಲ್ಲಿ ಸೆಪ್ಟಂಬರ್ ೧೩ ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜಿಯಾಗಬಹುದಾದ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ಕಳೆದ ಬಾರಿಗಿಂತ ಈ ಬಾರಿ ಹೆಚ್ಚು ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ.ಎಂ ತಿಳಿಸಿದ್ದಾರೆ.ಜಿಲ್ಲೆಯಲ್ಲಿ ಪ್ರಸ್ತುತ ವಿವಿಧ ಹಂತದ ನ್ಯಾಯಾಲಯಗಳಲ್ಲಿ ೩೮ ಸಾವಿರದ ೭೪೪ ಪ್ರಕರಣಗಳು ಬಾಕಿ ಇದ್ದು, ಇದರಲ್ಲಿ ೫ ಸಾವಿರ ಪ್ರಕರಣಗಳನ್ನು ಪಕ್ಷಗಾರರಿಗೆ ಹೊರೆಯಾಗದಂತೆ ಶೀಘ್ರವಾಗಿ ಇತ್ಯರ್ಥ ಮಾಡುವ ಗುರಿ ಹೊಂದಲಾಗಿದೆ. ಈ ಬಾರಿ ಕಳೆದ ಬಾರಿಗಿಂತ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥ ಪಡಿಸುವ ಗುರಿ ಹೊಂದಲಾಗಿದೆ. ಲೋಕ ಅದಾಲತ್‌ನಲ್ಲಿ ಒಂದು ಕೋಟಿ ಮೌಲ್ಯದ ವ್ಯಾಜ್ಯಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಮಾಹಿತಿ ನೀಡಿದ್ದಾರೆ.

**********

ಅಲೆಮಾರಿ ಜನಾಂಗದ ಜನರು ಸರ್ಕಾರಿ ಸವಲತ್ತುಗಳನ್ನು ಪಡೆದುಕೊಂಡು ಆರ್ಥಿಕವಾಗಿ ಸ್ವಾವಲಂಬಿಗಳಾಗಿ ಸಮಾಜದ ಮುಖ್ಯ ವಾಹಿನಿಗೆ ಬರಬೇಕು ಎಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಪಲ್ಲವಿ ಜಿ. ತಿಳಿಸಿದ್ದಾರೆ. ಕೋಲಾರ ತಾಲೂಕಿನ ಟೇಕಲ್ ಹೋಬಳಿಯ ಹುಳದೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಒಬ್ಬಟ್ಟಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕುಂದು ಕೊರತೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,ಚನ್ನದಾಸರ್ ಸಮುದಾಯ ರಾಜ್ಯದಲ್ಲಿ ಶೈಕ್ಷಣಿಕ, ಆರ್ಥಿಕ, ಸಾಮಾಜಿಕವಾಗಿ ಹಿಂದುಳಿದಿದೆ. ಇವರಿಗೆ ಸರ್ಕಾರದಿಂದ ದೊರೆಯುವ ಸವಲತ್ತುಗಳ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದ್ದಾರೆ.

**********

೧. ಬೆಂಗಳೂರು ನಗರದಲ್ಲಿ ಫೀಲ್ಡ್ ಮಾರ್ಷಲ್ ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಇದೇ ೧೫ ರಂದು ನಡೆಯಲಿರುವ ರಾಜ್ಯ ಮಟ್ಟದ ೭೯ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮ ವೀಕ್ಷಿಸಿಸಲು ಸಾರ್ವಜನಿಕರಿಗೆ ಪ್ರಥಮ ಬಾರಿಗೆ ಇ-ಪಾಸ್ ವ್ಯವಸ್ಥೆ ಕಲ್ಪಿಸಲಾಗಿದೆ. ಆಸಕ್ತರು ಸೇವಾ ಸಿಂಧು ವೆಬ್‌ಸೈಟ್ ನಲ್ಲಿ ಆಧಾರ್ ಹಾಗೂ ಮೊಬೈಲ್ ಸಂಖ್ಯೆಯನ್ನು ನಮೂದಿಸಿ ಒಟಿಪಿ ಮೂಲಕ ಇ-ಪಾಸ್‌ಅನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ. ಜಗದೀಶ್ ತಿಳಿಸಿದ್ದಾರೆ.

೨. ಮಾದಕ ದ್ರವ್ಯ ಮತ್ತು ತಂಬಾಕು ಉತ್ಪನ್ನಗಳ ಸೇವನೆಯಿಂದ ದೂರವಿರುವ ಮೂಲಕ ದೈಹಿಕ ಆರೋಗ್ಯ ಮತ್ತು ಸಾಮಾಜಿಕ ಸ್ವಾಸ್ಥ್ಯ ಕಾಪಾಡುವಂತೆ ಬೆಂಗಳೂರು ನಗರ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿ ಪ್ರೊ. ಕೆ.ಆರ್. ಜಲಜಾ ವಿದ್ಯಾರ್ಥಿಗಳಿಗೆ ಮನವಿ ಮಾಡಿದ್ದಾರೆ.

೩.	ಬೆಂಗಳೂರಿನ ಖಾಸಗಿ ಶಾಲೆಯ ವಿದ್ಯಾರ್ಥಿಗಳು ಇಂದು ಬಾಣಸವಾಡಿ ಮಿಲಿಟರಿ ಗೂರ್ಖಾ ಪಡೆಗಳ ಸೈನಿಕರ ಜತೆ ಇಂದು ರಕ್ಷಾ ಬಂಧನ ಆಚರಿಸಿದರು. ಈ ವೇಳೆ ಯೋಧರಿಗೆ ವಿದ್ಯಾರ್ಥಿಗಳು ರಾಖಿಗಳನ್ನು ಕಟ್ಟಿದರು. ಪ್ರತಿಯಾಗಿ ಯೋಧರು ದೇಶಭಕ್ತಿಯ ಮನೋಭಾವವನ್ನು ಬೆಳೆಸುವ ಸ್ಪೂರ್ತಿದಾಯಕ ಕತೆಗಳನ್ನು ಹಂಚಿಕೊಂಡರು.

*****END*****